## ಕರ್ನಾಟಕ ವಿಧಾನ ಪರಿಷತ್ತು

| ಶೂನ್ಯ ವೇಳೆಯ ಸೂಚನೆ | |
|---|---|
| ಶೂನ್ಯ ವೇಳೆಯ ಸೂಚನೆ ನೀಡಿದ ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್.ವ್ಹಿ. ಸಂಕನೂರ |

### ಸೂಚನೆಯ ವಿಷಯ

ರಾಜ್ಯದ ತಾಂತ್ರಿಕ ಶಿಕ್ಷಣ ಇಲಾಖೆ ಅಡಿಯಲ್ಲಿರುವ ಸರ್ಕಾರಿ ಇಂಜಿನಿಯರ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಬೇಡಿಕೆಗಳನ್ನು ಈಡೇರಿಸುವ ಕುರಿತು.

### ಉತ್ತರ

- ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಆಯಾ ವರ್ಷಗಳ ಸೆಮಿಸ್ಟರ್ ತರಗತಿಗಳ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು ತಾತ್ಕಾಲಿಕವಾಗಿ ಪಡೆಯಲಾಗುತ್ತಿದೆ.

- ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಟಿಪಿಇ 2017, ದಿನಾಂಕ:11.12.2019ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾಸಿಕ ಗೌರವಧನವನ್ನು ರೂ.10000/- ಗಳಿಂದ ರೂ.15000/-ಕ್ಕೆ ಹೆಚ್ಚಿಸಿ ಆದೇಶಿಸಲಾಗಿದ್ದು, ಪ್ರಸ್ತುತ ಜಾರಿಯಲ್ಲಿರುತ್ತದೆ. ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರುಗಳಿಗೆ ಕಾರ್ಯಭಾರ ಮತ್ತು ಮಾಸಿಕ ಭತ್ಯೆಯನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿರುತ್ತದೆ.

| ಕ್ರ.ಸಂ | ಸಂಸ್ಥೆ | ಕನಿಷ್ಟ ಮಾಸಿಕ ಕಾರ್ಯಭಾರ | ಗರಿಷ್ಟ ಮಾಸಿಕ ಕಾರ್ಯಭಾರ | ಗರಿಷ್ಟ ಕಾರ್ಯಭಾರಕ್ಕೆ ಮಾಸಿಕ ಭತ್ಯೆ |
|---|---|---|---|---|
| 1 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು | 16 ಗಂಟೆ | 32 ಗಂಟೆ | ರೂ. 15000/- |

- ಸರ್ಕಾರದ ಪತ್ರ ಸಂಖ್ಯೆ:ಇಡಿ 91 ಡಿಟಿಇ 2023, ದಿನಾಂಕ:16.09.2023ರಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2023-24ನೇ ಸಾಲಿನಲ್ಲಿ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಖಾಲಿಯಿರುವ ಬೋಧಕ ಹುದ್ದೆಗಳೆದುರಾಗಿ ಒಟ್ಟು 526 ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು 2023-24ನೇ ಸಾಲಿನ ಅಂತ್ಯದವರೆಗೆ ಪಡೆಯಲು ಅನುಮತಿ ನೀಡಲಾಗಿರುತ್ತದೆ.

- ಕಾಲೇಜು ಶಿಕ್ಷಣ ಇಲಾಖೆಯ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ವಿದ್ಯಾರ್ಹತೆ ಹಾಗೂ ಕಾರ್ಯಭಾರವನ್ನು ನಿಗದಿಪಡಿಸಿ ಗೌರವಧನವನ್ನು ಹೆಚ್ಚಿಸಿ ನಿಗದಿಪಡಿಸಲಾಗಿರುತ್ತದೆ. ಅದರಂತೆ, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೂ ಸಹ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.

ಕಡತ ಸಂಖ್ಯೆ:ಇಡಿ 506 ಟಿಇಸಿ 2023

(ಡಾ: ಎಂ.ಸಿ. ಸುಧಾಕರ್)
ಮಾನ್ಯ ಉನ್ನತ ಶಿಕ್ಷಣ ಸಚಿವರು